ಇ) ಖಾಯಂ ಮಾನ್ಯತೆ ಇಲ್ಲಿಯವರೆಗೆ ಕೊಡದೆ ಇರಲು ಕಾರಣಗಳೇನು?

ಶ್ರೀ ಹೆಚ್.ಜಿ. ಗೋವಿಂದೇಗೌಡ (ಪ್ರಾಥಮಿಕ, ಪ್ರೌಢ ಹಾಗೂ ಉನ್ನತ ಶಿಕ್ಷಣ ಸಚಿವರು) :

ಅ) 1952ರಲ್ಲಿ ಪ್ರಾರಂಭವಾಗಿದೆ.

ಆ) 1995-96ರಲ್ಲಿ ಅರ್ಜಿ ಸಲ್ಲಿಸಿದೆ.

ಇ) ತಾತ್ಕಾಲಿಕ ಮಾನ್ಯತೆ ನವೀಕರಣ, ಶಾಲೆಯಲ್ಲಿನ ಆಟದ ಮೈದಾನ, ಮೀಸಲಾತಿ ನಿಯಮಪಾಲನೆ ಬಗ್ಗೆ ಮಾಹಿತಿ ನೀಡಿಲ್ಲದಿರುವುದರಿಂದ ಖಾಯಂ ಮಾನ್ಯತೆ ನೀಡಲಾಗಿರುವುದಿಲ್ಲ. ಈ ಬಗ್ಗೆ ಮಾಹಿತಿ ಬಂದ ನಂತರ ಶಾಲೆಗೆ ಖಾಯಂ ಮಾನ್ಯತೆ ನೀಡುವ ಬಗ್ಗೆ ಪರಿಶೀಲಿಸಲಾಗುವುದು.

ಶಿಕ್ಷಣ ಇಲಾಖೆಯ ವರ್ಗಾವಣೆಯ ಆದೇಶ.

1570 - ಡಾ॥ ಎಂ.ಪಿ. ಕರ್ಕಿ (ಕುಮಟಾ) : ಮಾನ್ಯ ಪ್ರಾಥಮಿಕ, ಪ್ರೌಢ ಹಾಗೂ ಉನ್ನತ ಶಿಕ್ಷಣ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಶಿಕ್ಷಣ ಇಲಾಖೆಯಲ್ಲಿ ಈ ಸಲದ ವರ್ಗಾವಣೆ ಸರ್ಕಾರಿ ಆದೇಶದ ಪ್ರಕಾರ ಸಾರ್ವತ್ರಿಕ ವರ್ಗಾವಣೆಯೆ? ಅಥವಾ ಕೋರಿಕೆ ವರ್ಗಾವಣೆಯೇ?

ಆ) ಈ ವರ್ಗಾವಣೆಗೆ ಮಾರ್ಗ ಸೂಚಿಗಳು ಯಾವುವು?

ಶ್ರೀ ಹೆಚ್.ಜಿ. ಗೋವಿಂದೇಗೌಡ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಉನ್ನತ ಶಿಕ್ಷಣ ಸಚಿವರು) :

ಅ) ವರ್ಗಾವಣೆಯು ಪ್ರಾಥಮಿಕವಾಗಿ ಕೋರಿಕೆಯ ಮೇರೆಗೆ ಮಾಡಲಾಗುತ್ತದೆ. ಆದರೆ ವರ್ಗಾವಣೆಯನ್ನು ಸಾರ್ವಜನಿಕ ಹಿತದೃಷ್ಟಿಯಿಂದಲೂ ಸಹ ಕೈಗೊಳ್ಳಲಾಗುತ್ತದೆ.

ಆ) ಸಾರ್ವಜನಿಕ ಶಿಕ್ಷಣ ಇಲಾಖೆಗೆ ವರ್ಗಾವಣೆ ಮಾರ್ಗ ಸೂಚಿಯನ್ನು ಹೊರಡಿಸಲಾಗಿದೆ.

ಕುಮಟಾದಲ್ಲಿರುವ ಜಿಲ್ಲಾ ಶಿಕ್ಷಣ ಮತ್ತು ತರಬೇತಿ ಸಂಸ್ಥೆ ಖಾಲಿ ಹುದ್ದೆಗಳು.

1571- ಡಾ॥ ಎಂ.ಪಿ. ಕರ್ಕಿ (ಕುಮಟಾ) : ಮಾನ್ಯ ಪ್ರಾಥಮಿಕ, ಪ್ರೌಢ ಹಾಗೂ ಉನ್ನತ ಶಿಕ್ಷಣ ರಾಜ್ಯ ಸಚಿವರು. ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕುಮಟಾದಲ್ಲಿರುವ ಜಿಲ್ಲಾ ಶಿಕ್ಷಣ ಮತ್ತು ತರಬೇತಿ ಸಂಸ್ಥೆಯಲ್ಲಿ ಬೋಧಕರ ಹುದ್ದೆಗಳು ಖಾಲಿ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಹಾಗಿದ್ದಲ್ಲಿ ಎಷ್ಟು ವರ್ಷಗಳಿಂದ ಯಾವ ಯಾವ ಹುದ್ದೆಗಳು ಖಾಲಿ ಇವೆ?

ಇ) ಈ ಖಾಲಿ ಹುದ್ದೆಗಳನ್ನು ತುಂಬಲು ಸರ್ಕಾರವು ಯಾವಾಗ ಕ್ರಮ ಕೈಗೊಳ್ಳಲಾಗುತ್ತದೆ?